**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ,**
**ಮೂಡಿಗೆರೆ**

**ಸಿ.ಸಿ. ಸಂಖ್ಯೆಃ 1107/2023**

**ಪಿರ್ಯಾದಿ** : ಇಂಚರ ಬಿನ್ ಸತೀಶ ಹೆಚ್.ವಿ.
ವಾಸಃ ಆಲೇಖಾನ್ ಹೊರಟ್ಟಿ,
ತರುವೆ ಗ್ರಾಮ, ಕೊಟ್ಟಿಗೆಹಾರ ಅಂಚೆ,
ಮೂಡಿಗೆರೆ ತಾಲ್ಲೂಕು, ಚಿಕ್ಕಮಗಳೂರು ಜಿಲ್ಲೆ.

**ವಿರುದ್ಧ**

**ಆರೋಪಿ** : ಗೀತಾಂಜಲಿ ಸಿ.ಎಂ.
ಬಿನ್ ಲೇಟ್ ಮಂಜುನಾಥ್ ಆರ್.
ವಾಸಃ ಮೂರುಮನೆಹಳ್ಳಿ ರಸ್ತೆ, ಕೋಟೆ,
ಕುವೆಂಪುನಗರ, ಚಿಕ್ಕಮಗಳೂರು.

**ಆಪಾದನೆಯ ಸಾರಾಂಶ**

ಶ್ರೀ. ವಿಶ್ವನಾಥ್ ಎ., ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಮೂಡಿಗೆರೆ, ಆದ ನಾನು, ಆರೋಪಿಯಾದ ನಿಮ್ಮ ಮೇಲೆ ಮಾಡುವ ಆಪಾದನೆ ಏನೆಂದರೆಃ-

ಆರೋಪಿಯಾದ ನೀವು ನಿಮ್ಮ ತುರ್ತು ಹಣಕಾಸಿನ ಅವಶ್ಯಕತೆಗಳಿಗೋಸ್ಕರ ಫಿರ್ಯಾದಿಯಿಂದ 3,85,000/- ರೂಪಾಯಿಗಳನ್ನು ಸಾಲವಾಗಿ ಪಡೆದಿದ್ದು, ಸದರಿ ಹಣದ ಮರುಪಾವತಿಗಾಗಿ ನಿಮ್ಮ ಖಾತೆ ಹೊಂದಿರುವ ಕೆನರಾ ಬ್ಯಾಂಕ್, ಚಿಕ್ಕಮಗಳೂರು ಕೋಟೆ ಶಾಖೆಯ ಚೆಕ್ ಸಂಖ್ಯೆಃ 626719, ದಿನಾಂಕ 20.04.2023,

ರೂ.3,85,000/- ಎಂದು ನಮೂದಿಸಿ ನೀಡಿದ್ದು, ಸದರಿ ಚೆಕ್ ಅನ್ನು ಫಿರ್ಯಾದಿಯು ಕರ್ನಾಟಕ ಬ್ಯಾಂಕ್ ಲಿಮಿಟೆಡ್, ಬಣಕಲ್ ಶಾಖೆಯಲ್ಲಿ ಜಮೆಗಾಗಿ ಸಲ್ಲಿಸಿದಾಗ, "ನಿಮ್ಮ ಖಾತೆಯಲ್ಲಿ ಸಾಕಷ್ಟು ಹಣವಿರುವುದಿಲ್ಲ (Funds insufficient) ಎಂದು ಹಿಂಬರಹ ನೀಡಿದ್ದು ಇರುತ್ತದೆ. ಕಾರಣ, ಫಿರ್ಯಾದಿಯು ದಿನಾಂಕ 26.06.2023 ರಂದು ನೋಟೀಸ್ ಮೂಲಕ ಆರೋಪಿಯಾದ ನಿಮಗೆ ಸದರಿ ವಿಚಾರವನ್ನು ತಿಳಿಸಿದರೂ ಸಹ ನೀವು ಹಣವನ್ನು ವಾಪಸ್ ಮಾಡಿರುವುದಿಲ್ಲ. ಈ ರೀತ್ಯಾ ನೀವು **ನೆಗೋಷಿಬಲ್ ಇನ್ಸ್ಟ್ರುಮೆಂಟ್ ಆಕ್ಟ್ ಕಲಂ 138** ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಮಾಡಿರುವಿರಿ ಎಂದು ಆಪಾದಿಸಲಾಗಿದೆ?

ಪ್ರ: 1. ಈಗ ಮೇಲೆ ಓದಿ ಹೇಳಿದ ಆಪಾದನೆಯನ್ನು ಕೇಳಿದ್ದೀರಾ? ಅದು ನಿಮಗೆ ಅರ್ಥವಾಯಿತೇ?

ಆರೋಪಿಯ ಉತ್ತರ:

ಪ್ರ: 2 ನೀವು ಆಪಾದನೆಯನ್ನು ಒಪ್ಪಿಕೊಳ್ಳುವಿರೋ ಅಥವಾ ವಿಚಾರಣೆಯಾಗಬೇಕೋ?

ಆರೋಪಿಯ ಉತ್ತರ:

*(ಆರೋಪಿಗೆ ದಿನಾಂಕ 06.12.2023 ರಂದು ಆಪಾದನೆಯ ಸಾರಾಂಶವನ್ನು ಅವರಿಗೆ ತಿಳಿಯುವ ಭಾಷೆಯಲ್ಲಿ ಓದಿ, ಅವರ ಹೇಳಿಕೆಯನ್ನು ನನ್ನ ಸಮಕ್ಷಮದಲ್ಲಿ ಬರೆದುಕೊಳ್ಳಲಾಯಿತು. ಅದು ಸತ್ಯವಾಗಿಯೂ ಮತ್ತು ಸರಿಯಾಗಿಯೂ ಇರುತ್ತದೆ ಅಂತಾ ಪ್ರಮಾಣೀಕರಿಸುತ್ತೇನೆ)*

**SD/-**

ಮೂಡಿಗೆರೆ — ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು

ದಿನಾಂಕ: 06.12.2023 — ಜೆ.ಎಂ.ಎಫ್.ಸಿ, ಮೂಡಿಗೆರೆ.